ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 08–08–2019

## ಪತ್ರಿಕಾ ಆಮಂತ್ರಣ

1. **ಭಾರತ ಗ್ರಂಥಾಲಯ ವಿಜ್ಞಾನ ಪಿತಾಮಹರಾದ ಪದ್ಮಶ್ರೀ ಡಾ. ಎಸ್. ಆರ್. ರಂಗನಾಥನ್ ಇವರ 127ನೇ ಜನ್ಮದಿನಾಚರಣೆ:**
   **ಗ್ರಂಥಪಾಲಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ:**

   ಉದ್ಘಾಟನೆ:

   ಡಿ. ವಿ. ಸದಾನಂದಗೌಡ,
   ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು, ಭಾರತ ಸರ್ಕಾರ.

   ಪುಸ್ತಕ ಪ್ರದರ್ಶನ ಉದ್ಘಾಟನೆ:

   ಶ್ರೀಮತಿ ನಿರ್ಮಲಾ ಸೀತಾರಾಮನ್,
   ಕೇಂದ್ರ ಹಣಕಾಸು ಸಚಿವರು, ಭಾರತ ಸರ್ಕಾರ

   ಘನ ಉಪಸ್ಥಿತಿ:

   ಕೆ. ಪ್ರತಾಪಚಂದ್ರ ಶೆಟ್ಟಿ,
   ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್,

   ವಿಶ್ವೇಶ್ವರ ಹೆಗಡೆ ಕಾಗೇರಿ
   ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ.

   ಪುರಸ್ಕೃತರಿಗೆ ಪ್ರಶಸ್ತಿ ಪ್ರದಾನ:

   ಶ್ರೀಮತಿ ಗಂಗಾಂಬಿಕೆ ಮಲ್ಲಿಕಾರ್ಜುನ,
   ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ
   ಅಧ್ಯಕ್ಷರು, ಬೆಂಗಳೂರು ನಗರ ಗ್ರಂಥಾಲಯ ಪ್ರಾಧಿಕಾರ.

**ಅಧ್ಯಕ್ಷತೆ:**

ಎಂ. ಕೃಷ್ಣಪ್ಪ, ಶಾಸಕರು,
ವಿಜಯನಗರ ವಿಧಾನಸಭಾ ಕ್ಷೇತ್ರ.

ದಿನಾಂಕ: 12-08-2019, ಸೋಮವಾರ ಸಮಯ: ಬೆಳಿಗ್ಗೆ: 11-00 ಗಂಟೆಗೆ.

ಸ್ಥಳ: ಗ್ರಂಥಾಂಗಣ, ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ, ಹಂಪಿನಗರ, ಬೆಂಗಳೂರು.

## ಮಾಧ್ಯಮದವರ ಗಮನಕ್ಕೆ

**ಬೆಂ.ನಗರ.ಜಿಲ್ಲೆ, ಆಗಸ್ಟ್ 08: (ಕರ್ನಾಟಕ ವಾರ್ತೆ) :** ಆಗಸ್ಟ್ 15 ರಂದು ಮಾಣಿಕ್‌ಷಾ ಪರೇಡ್ ಮೈದಾನದಲ್ಲಿ ನಡೆಯುವ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಮಾಧ್ಯಮದವರು ಭಾಗವಹಿಸಲು ಅನುಕೂಲವಾಗುವಂತೆ 1 ಮಾಧ್ಯಮಕ್ಕೆ ಒಬ್ಬ ವರದಿಗಾರರು ಹಾಗೂ ಕ್ಯಾಮರಾಮಾನ್‌ಗೆ ಒಂದರಂತೆ ಪ್ರತಿ ಮಾಧ್ಯಮಕ್ಕೆ 2 ಪಾಸ್‌ಗಳನ್ನು ಆಗಸ್ಟ್ 13 ಮತ್ತು 14 ರಂದು ವಿತರಿಸಲಾಗುವುದು.

ಮಾಧ್ಯಮದವರು ಉಪ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ಎರಡನೇ ಮಹಡಿ, ನಂ.17, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ) ಬೆಂಗಳೂರು-560 001 ಸಂಪರ್ಕಿಸಿ ಇಲಾಖೆಯಿಂದ ನೀಡಿರುವ ಮಾಧ್ಯಮ ಮಾನ್ಯತಾ ಕಾರ್ಡ್‌ನ ಒಂದು ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ನೀಡಿ ಪಾಸ್‌ನ್ನು ಕಚೇರಿ ವೇಳೆಯಲ್ಲಿ ಪಡೆಯಬಹುದು.

**ಪತ್ರಿಕಾ ಪ್ರಕಟಣೆ**

## “ಜಾನುವಾರು ರಕ್ಷಣೆಗೆ ಸಹಾಯವಾಣಿ”

**ಬೆಂಗಳೂರು, ಆಗಸ್ಟ್ 8 (ಕರ್ನಾಟಕ ವಾರ್ತೆ)**

ರಾಜ್ಯದ ಪ್ರವಾಸ ಪೀಡಿತ ಜಿಲ್ಲೆಗಳಲ್ಲಿ ತೊಂದರೆಗೊಳಗಾಗಿರುವ ಜಾನುವಾರುಗಳನ್ನು ರಕ್ಷಿಸಲು ಮತ್ತು ಅವುಗಳ ನಿರ್ವಹಣೆ ಕುರಿತಂತೆ ಸಾರ್ವಜನಿಕರು/ರೈತರು ಮತ್ತು ಜಾನುವಾರು ಮಾಲೀಕರುಗಳ ನೆರವಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯು ರಾಜ್ಯ ಮಟ್ಟದಲ್ಲಿ ನಿರಂತರ ಸಹಾಯವಾಣಿ (ಕಂಟ್ರೋಲ್ ರೂಂ 24/7) ಯನ್ನು ಸ್ಥಾಪಿಸಿದ್ದು, ಈ ಕೆಳಕಂಡ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆಯ ಆಯುಕ್ತರ ಪ್ರಕಟಣೆ ತಿಳಿಸಿದೆ.

1. 080–23417100 ಕರೆಗಳು
2. 8277894666 – ವಾಟ್ಸ್‌ಪ್, ಟೆಲಿಗ್ರಾಂ ಮತ್ತು ತುರ್ತು ಕರೆಗಳು

## ನಿಜಲಿಂಗಪ್ಪ ಪುಣ್ಯತಿಥಿ

ಬೆಂಗಳೂರು, ಆಗಸ್ಟ್ 8 ( ಕರ್ನಾಟಕ ವಾರ್ತೆ)

ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯಭಾಸ್ಕರ್ ಅವರು ಇಂದು ಮಾಜಿ ಮುಖ್ಯಮಂತ್ರಿ ಎಸ್. ನಿಜಲಿಂಗಪ್ಪ ಅವರ ಪುಣ್ಯತಿಥಿ ಅಂಗವಾಗಿ ವಿಧಾನಸೌಧ ಆವರಣದಲ್ಲಿರುವ ಅವರ ಪ್ರತಿಮೆಯ ಮುಂಬಾಗದಲ್ಲಿ ಇರಿಸಲಾದ ಭಾವಚಿತ್ರಕ್ಕೆ ಸರ್ಕಾರದ ವತಿಯಿಂದ ಪುಷ್ಪನಮನ ಸಲ್ಲಿಸಿ ಗೌರವಿಸಿದರು. ವಿಧಾನ ಪರಿಷತ್ ಸದಸ್ಯ ಕೊಂಡಜ್ಜಿ ಮೋಹನ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ವಂದಿತಾ ಶರ್ಮ, ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಐ.ಎಸ್.ಎಸ್. ಪ್ರಸಾದ್ ಹಾಗೂ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಉಪ ಕಾರ್ಯದರ್ಶಿ ನಾಗರಾಜ್ ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.